# ಸರ್ಕಾರ ಭಾಷಣ ರಾಜ್ಯಪಾಲರು ಓದಲೇಬೇಕು: ಹೊರಟ್ಟಿ ಸ್ಪಷ್ಟನೆ

## ಈ ಅಂಶ ಸಂವಿಧಾನದಲ್ಲಿ ಸ್ಪಷ್ಟ: ವಿ.ಪ. ಸಭಾಪತಿ



• **ಕನ್ನಡಪ್ರಭ ವಾರ್ತೆ** ಬೆಂಗಳೂರು

ಜಂಟಿ ಅಧಿವೇಶನದ ವೇಳೆ ರಾಜ್ಯ ಸರ್ಕಾರ ಸಿದ್ಧಪಡಿಸಿದ ಭಾಷಣವನ್ನು ರಾಜ್ಯಪಾಲರು ಓದಲೇಬೇಕು, ಸಂವಿಧಾನದಲ್ಲಿ ಈ ಅಂಶ ಸ್ಪಷ್ಟವಾಗಿದೆ ಎಂದು ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಹೇಳಿದರು. ತಮಿಳುನಾಡು, ಕೇರಳ ರಾಜ್ಯದಲ್ಲಿ ರಾಜ್ಯಪಾಲರು ಜಂಟಿ ಅಧಿವೇಶನದಲ್ಲಿ ಸರ್ಕಾರ ಸಿದ್ಧಪಡಿಸಿದ ಭಾಷಣದಲ್ಲಿ ಕೆಲ ಅಂಶ ಓದದೇ ಇರುವುದು, ಸರ್ಕಾರ ಹಾಗೂ ರಾಜ್ಯಪಾಲರ ನಡುವೆ ಸಂಘರ್ಷ ಉಂಟಾಗಿರುವ ಬಗ್ಗೆ ಪ್ರತಿಕ್ರಿಯಿಸಿದ ಅವರು, ಕೇಂದ್ರ ಮತ್ತು ರಾಜ್ಯಗಳಲ್ಲಿ ಬೇರೆ ಬೇರೆ ಪಕ್ಷಗಳು ಇದ್ದಾಗ ಇಂಥ ಪ್ರಸಂಗ ಇತ್ತೀಚೆಗೆ ನಡೆಯುತ್ತಿವೆ. ಆದರೆ ಯಾವುದೇ ರಾಜ್ಯ ಸರ್ಕಾರ ಸಿದ್ಧಪಡಿಸಿದ ಭಾಷಣದಲ್ಲಿ ಕೇಂದ್ರವನ್ನು ಟೀಕಿಸುವ ಅಂಶಗಳಿದ್ದರೆ ಅಥವಾ ಇರಿಸು-ಮುರಿಸು ಆಗುವಂತಹ ಅಂಶಗಳಿದ್ದರೂ ರಾಜ್ಯಪಾಲರು ಓದಬೇಕಾಗುತ್ತದೆ ಎಂದರು. ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕರ್ನಾಟಕದ ಮಟ್ಟಿಗೆ ನೆರೆಯ ರಾಜ್ಯಗಳ ನಡೆದಿರುವ ಪ್ರಸಂಗ ರಾಜ್ಯದಲ್ಲಿ ನಡೆಯುವುದಿಲ್ಲ ಎಂಬ ವಿಶ್ವಾಸವಿದೆ. ಯಾವುದೇ ಸರ್ಕಾರವಾಗಲಿ ಸಂವಿಧಾನದ ವಿರುದ್ಧವಾಗಿ ನಡೆದುಕೊಳ್ಳಲು ಬರುವುದಿಲ್ಲ ಎಂದು ಹೇಳಿದರು.

ವರ್ಷದ ಮೊದಲ ಅಧಿವೇಶನದಲ್ಲಿ ರಾಜ್ಯಪಾಲರು ಉಭಯ ಸದನ ಸದಸ್ಯರನ್ನುದ್ದೇಶಿಸಿ ಭಾಷಣ ಮಾಡಬೇಕೆಂಬ ನಿಯಮವಿದೆ. ರಾಜ್ಯಪಾಲರು ಮಾತನಾಡಲಿದ್ದಾರೆ ಎಂದರು.